**Bangalore**
**Regional News**
**18.06.2025 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ವಿದ್ಯುತ್ ಪ್ರಸರಣ ಇಲಾಖೆಯಲ್ಲಿ ಖಾಲಿಯಿರುವ ೩೫ ಸಾವಿರ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲು ಸರ್ಕಾರ ನಿರ್ಧಾರ
2. ಮೆಟ್ರೊ ನಿಲ್ದಾಣಗಳಲ್ಲಿ ಅಮೂಲ್ ಮಳಿಗೆಗೆ ಅವಕಾಶ - ರಾಜ್ಯ ಸರ್ಕಾರದ ವಿರುದ್ಧ ಜೆಡಿಎಸ್, ಬಿಜೆಪಿ ಅಸಮಾಧಾನ
3. ಜಲ ಸಂರಕ್ಷಣೆ ಅಭಿಯಾನ ಸಪ್ತಾಹದಲ್ಲಿ ಬೆಂಗಳೂರು ಜಲ ಮಂಡಳಿಗೆ ಗಿನ್ನಿಸ್ ವರ್ಲ್ಡ್ ರೆಕಾರ್ಡ್ ಪ್ರಮಾಣ ಪತ್ರ
4. ಇರಾನ್-ಇಸ್ರೆಲ್ ನಲ್ಲಿ ಸಿಲುಕಿರುವ ಕನ್ನಡಿಗರ ರಕ್ಷಣೆಗೆ ಸೂಕ್ತ ಕ್ರಮ: ರಾಜ್ಯ ಅನಿವಾಸಿ ಭಾರತೀಯ ಕೋಶ ಸ್ಪಷ್ಟನೆ
5. ಕೇರಳದ ವಯನಾಡಿನಲ್ಲಿ ಭಾರೀ ಮಳೆ ಹಿನ್ನೆಲೆ : ಕಬಿನಿ ಜಲಾಶಯದಿಂದ ನೀರು ಬಿಡುಗಡೆ : ನದಿಪಾತ್ರದ ಜನರಿಗೆ ಎಚ್ಚರಿಕೆ

<><><><>

ವಿದ್ಯುತ್ ಪ್ರಸರಣ ಇಲಾಖೆಯಲ್ಲಿ ಖಾಲಿ ಇರುವ ೩೫ ಸಾವಿರ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ನೌಕರರ ಸಂಘದ ವಜ್ರ ಮಹೋತ್ಸವ ಉದ್ಘಾಟಿಸಿ, ವಜ್ರಜ್ಯೋತಿ ಸ್ಮರಣ ಸಂಚಿಕೆ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು. ಆಹಾರ ಉತ್ಪಾದನೆಯಲ್ಲಿ ನಾವು ಸ್ವಾವಲಂಬಿಗಳಾಗುತ್ತಿರುವುದಕ್ಕೆ ವಿದ್ಯುತ್ ಉತ್ಪಾದನೆಯಲ್ಲಿ ಸ್ವಾವಲಂಭಿಗಳಾಗಿರುವುದೆ ಕಾರಣ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ಸಿದ್ದರಾಮಯ್ಯ, ಮುಖ್ಯಮಂತ್ರಿ

ವಿದ್ಯುತ್ ಪ್ರಮುಖ ಕಚ್ಚಾವಸ್ತು ಎನ್ನುವುದನ್ನು ನಾವು ಮರೆಯಬಾರದು ಎಂದು ತಿಳಿಸಿದ್ದಾರೆ. ನೌಕರರು ಮತ್ತು ಕಾರ್ಮಿಕರು ಬಹಳ ಶ್ರಮ ವಹಿಸಿ ಕಾರ್ಯ ನಿರ್ವಹಿಸುತ್ತಿದ್ದು ನಿಮ್ಮ ಎಲ್ಲಾ ಬೇಡಿಕೆಗಳನ್ನೂ ಈಡೇರಿಸಲು ಸರ್ಕಾರ ಸಿದ್ಧವಿದೆ ಎಂದು ಹೇಳಿದ್ದಾರೆ. ಇದೇ ವೇಳೆ ರಾಜ್ಯದಲ್ಲಿರುವ ಎಸ್ಕಾಂಗಳನ್ನು ಖಾಸಗೀಕರಣ ಮಾಡಲು ಅವಕಾಶ ನೀಡುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಭರವಸೆ ನೀಡಿದ್ದಾರೆ. ಇಂಧನ ಸಚಿವ ಕೆ.ಜೆ.ಜಾರ್ಜ್ ಮಾತನಾಡಿ, ರಾಜ್ಯ ಸರ್ಕಾರದ

ಜನಪರ ಯೋಜನೆಗಳ ಅನುಷ್ಠಾನಕ್ಕೆ ಕೆಪಿಟಿಸಿಎಲ್ ನೌಕರರ ಸಂಘ ಬೆಂಬಲವಾಗಿದೆ, ನಮ್ಮ ಸರ್ಕಾರವೂ ಈ ಸಂಘದ ಪರವಾಗಿದೆ ಎಂದು ಹೇಳಿದ್ದಾರೆ.

<><><>

ಮೆಟ್ರೋ ನಿಲ್ದಾಣಗಳಲ್ಲಿ ೮ ನಂದಿನಿ ಮಳಿಗೆ ತರೆಯಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತಾನಾಡಿದ ಅವರು, ಮೆಟ್ರೋ ನಿಲ್ದಾಣಗಳಲ್ಲಿ ನಂದಿನಿ ಮಳಿಗೆ ತೆರೆಯಲು ಅವಕಾಶ ನೀಡುವಂತೆ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದ್ದಾರೆ. ೧೦ ಕಡೆಗಳ ಪೈಕಿ ಎರಡು ಕಡೆ ಅಮೂಲ್ ಜಾಗತಿಕ ಟೆಂಡರ್ ನಲ್ಲಿ ಅರ್ಜಿ ಹಾಕಿ ಮಳಿಗೆ ತೆರೆದಿದೆ. ಈಗ ತೆರೆಯಲಾಗಿರುವ ಅಮೂಲ್ ಮಳಿಗೆ ಮುಚ್ಚಿಸುವುದು ಸರಿಯಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಟೀಕಿಸಿರುವ ಜೆಡಿಎಸ್ ಸರ್ಕಾರ ಕನ್ನಡಿಗರ ಹೆಮ್ಮೆಯ ಬ್ರಾಂಡ್ ನಂದಿನಿಯ ಹಿತಾಶಕ್ತಿಗೆ ಧಕ್ಕೆ ತರುತ್ತಿದೆ ಎಂದು ಆರೋಪಿಸಿದೆ. ಬಿಜೆಪಿ ಸಂಸದ ಪಿಸಿ ಮೋಹನ್ ರಾಜ್ಯಸರ್ಕಾರ ನಂದಿನಿ ಬದಲು ಅಮೂಲ್ ಗೆ ೧೦ ಮಳಿಗೆಗಳನ್ನು ನೀಡಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಆರೋಪಿಸಿದ್ದಾರೆ.

<><><>

ಕಳೆದ ಮಾರ್ಚ್ ೨೧ ರಿಂದ ೨೮ ರವರೆಗೆ ನಡೆದ ಜಲ ಸಂರಕ್ಷಣೆ ಅಭಿಯಾನ ಸಪ್ತಾಹದಲ್ಲಿ ೫ ಲಕ್ಷ ೩೩ ಸಾವಿರದ ೬೪೨ ಮಂದಿ ಪ್ರತಿಜ್ಞೆ ಸ್ವೀಕರಿಸಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಐತಿಹಾಸಿಕ ಸಾಧನೆ ಮಾಡಿದೆ. ಈ ಹಿನ್ನೆಲೆಯಲ್ಲಿ ಗಿನ್ನೆಸ್ ವರ್ಲ್ಡ್ ರೆಕಾರ್ಡ್ ತೀರ್ಪುಗಾರ ಸ್ವಪ್ನಲ್ ದಂಗರಿಕರ್ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ  ಗಿನ್ನಿಸ್ ವರ್ಲ್ಡ್ ರೆಕಾರ್ಡ್ ಪ್ರಮಾಣ ಪತ್ರ ವಿತರಿಸಿದರು. ಈ ಸಂದರ್ಭದಲ್ಲಿ ಮಂಡಳಿಯ ಅಧ್ಯಕ್ಷರಾದ ಡಾ ರಾಮ್ ಪ್ರಸಾತ್ ಮನೋಹರ್, ಎಫ್ ಕೆಸಿಸಿಐ ಅಧ್ಯಕ್ಷ ಎಂ ಜಿ ಬಾಲಕೃಷ್ಣ, ಕಾಸಿಯಾ ಅಧ್ಯಕ್ಷ ಎಂ ಜಿ ರಾಜಗೋಪಾಲ್ ಮತ್ತಿತರರು ಉಪಸ್ಥಿತರಿದ್ದರು.

<><><>

ಕೇರಳದ ವಯನಾಡಿನಲ್ಲಿ ಧಾರಾಕಾರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ  ಮೈಸೂರು ಜಿಲ್ಲೆ ಎಚ್.ಡಿ.ಕೋಟೆ ತಾಲ್ಲೂಕಿನ ಬೀಚನಹಳ್ಳಿಯಲ್ಲಿರುವ ಕಬಿನಿ ಜಲಾಶಯದ ಒಳಹರಿವಿನಲ್ಲಿ ಏರಿಕೆ ಕಂಡುಬಂದಿದೆ. ಜಲಾಶಯದ ಇಂದಿನ ಒಳಹರಿವು ೨೩ ಸಾವಿರದ ८८೫ ಕ್ಯೂಸೆಕ್ ಆಗಿದ್ದು ಜಲಾಶಯದ ಇಂದಿನ ಹೊರಹರಿವು ೨೫ ಸಾವಿರ ಕ್ಯೂಸೆಕ್ ಆಗಿದೆ. ವಯನಾಡಿನಲ್ಲಿ ಧಾರಾಕಾರ ಮಳೆ ಸುರಿಯುತ್ತಿರುವ ಪರಿಣಾಮ ಕಬಿನಿ ಜಲಾಶಯಕ್ಕೆ ಮತ್ತಷ್ಟು ಒಳಹರಿವು ಹೆಚ್ಚಾಗಲಿದ್ದು, ಯಾವುದೇ ಕ್ಷಣದಲ್ಲಾದರೂ ಜಲಾಶಯದಿಂದ ಕಪಿಲಾ ನದಿಗೆ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡಲಾಗುವುದು ಎಂದು ನೀರಾವರಿ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಈ

ಹಿನ್ನೆಲೆಯಲ್ಲಿ ಕಪಿಲಾ ನದಿ ಪಾತ್ರದ ತಗ್ಗು ಪ್ರದೇಶಗಳಲ್ಲಿ ವಾಸಿಸುತ್ತಿರುವ ಜನರು ಎಚ್ಚರಿಕೆ ವಹಿಸುವಂತೆ ಸೂಚನೆ ನೀಡಲಾಗಿದೆ.

<><><>

ಇರಾನ್ ಇಸ್ರೇಲ್ ಯುದ್ಧ ನಡೆಯುತ್ತಿದೆ. ಆ ದೇಶಗಳಿಗೆ ಉದ್ಯೋಗ, ಕೆಲಸದ ನಿಮಿತ್ತ ಹೋಗಿರುವ ಕನ್ನಡಿಗರು ಯುದ್ಧಪೀಡಿತ ದೇಶಗಳಲ್ಲಿ ಸಿಲುಕಿದ್ದಾರೆ. ಅವರನ್ನು ಸುರಕ್ಷಿತವಾಗಿ ವಾಪಸ್ ಕರೆಯಿಸಿಕೊಂಡು ಬರಲಾಗುತ್ತದೆ ಎಂದು ಕರ್ನಾಟಕ ರಾಜ್ಯ ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷೆ ಆರತಿ ಕೃಷ್ಣ ಹೇಳಿದ್ದಾರೆ. ಇರಾನ್ ನಲ್ಲಿ ೧೫೦ ಕ್ಕೂ ಅಧಿಕ ಸಂಖ್ಯೆಯ ಕನ್ನಡಿಗರು ಸಿಲುಕಿಕೊಂಡಿದ್ದಾರೆ. ಅವರ ರಕ್ಷಣೆಗೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆಯ ೧೦೦ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ನಾಗರಿಕರಿದ್ದು, ಅವರೆಲ್ಲರನ್ನು ಸುರಕ್ಷಿತವಾಗಿ ತಾಯ್ನಾಡಿಗೆ ಕರೆತರುವ ಪ್ರಯತ್ನಗಳನ್ನು ಕೇಂದ್ರ ಸರ್ಕಾರ ಮಾಡಲಿದೆ ಎಂದು ಚಿಕ್ಕಬಳ್ಳಾಪುರ ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ.

<><><>

ಗೃಹಸಚಿವ ಅಮಿತ್ ಶಾ ನಾಳೆ ರಾತ್ರಿ ಬೆಂಗಳೂರಿಗೆ ಆಗಮಿಸಲಿದ್ದಾರೆ. ನಾಡಿದ್ದು ಅವರು ಬೆಂಗಳೂರಿನ ಮಾದನಾಯಕನ ಹಳ್ಳಿಯ ಆದಿಚುಂಚನಗಿರಿ ವಿಶ್ವವಿದ್ಯಾಲಯ ನೂತನ ಕ್ಯಾಂಪಸ್ ಉದ್ಘಾಟನೆ ನಡೆಸಲಿದ್ದಾರೆ. ಮಂಡ್ಯದಲ್ಲಿ ಪ್ರದಾನ ಕಚೇರಿಯನ್ನು ಹೊಂದಿರುವ ಆದಿಚುಂಚನಗಿರಿ ವಿಶ್ವವಿದ್ಯಾಲಯವು ನಾಗರೂರಿನಲ್ಲಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯನ್ನು ವಿಸ್ತರಿಸಿದೆ. ಸಮಾರಂಭದಲ್ಲಿ ಆದಿಚುಂಚನಗಿರಿ ಮಠದ ಕುಲಪತಿ ಹಾಗೂ ಮುಖ್ಯಸ್ಥರಾದ ಡಾ.ನಿರ್ಮಲಾನಂದ ಸ್ವಾಮೀಜಿ, ಕೇಂದ್ರ ಸಚಿವರಾದ ಹೆಚ್. ಡಿ. ಕುಮಾರಸ್ವಾಮಿ, ವಿ.ಸೋಮಣ್ಣ ಉನ್ನತ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಭಾಗವಹಿಸಲಿದ್ದಾರೆ.

<><><>

ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗದಿಂದ ಇಂದು ರಾತ್ರಿ ೮ ರಿಂದ ೮.೩೦ರವರೆಗೆ ಗರ್ಭಿಣಿಯರಿಗೆ ಯೋಗ ಎಂಬ ವಿಶೇಷ ಸಂದರ್ಶನ ಕಾರ್ಯಕ್ರಮ ಪ್ರಸಾರವಾಗಲಿದೆ. ಯೋಗ ತರಬೇತುದಾರರಾದ ಸಿ. ಅಂಬಿಕಾ ಭಾಗವಹಿಸಲಿದ್ದು, ಸಂದರ್ಶನವನ್ನು ಹಿರಿಯ ಪತ್ರಕರ್ತ ನಂಜುಂಡಪ್ಪ ವಿ. ನಡೆಸಿಕೊಡಲಿದ್ದಾರೆ.

<><><>

ಇದೇ ೨೧ ರಂದು ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಯೋಗಾಭ್ಯಾಸದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಚಿಕ್ಕಮಗಳೂರು ನಗರದಲ್ಲಿ ಇಂದು ಕಾಲ್ನಡಿಗೆ ಜಾಥಾ ನಡೆಯಿತು. ಯೋಗ ಜಾಥಾಕ್ಕೆ ನಗರಸಭೆ ಅಧ್ಯಕ್ಷೆ ಬಿ.ಸಿ.ಸುಜಾತ ಶಿವಕುಮಾರ್ ಹಸಿರು ನಿಶಾನೆ ತೋರಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಆಯುಷ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿವಿಧ ಯೋಗ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ನಡೆದ ಈ ಜಾಥಾದಲ್ಲಿ ಆನೇಕ ಸಂಘ ಸಂಸ್ಥೆಗಳ ಸದ್ಯರು ಭಾಗವಹಿಸಿದ್ದರು.

<><><>

ಮಗಳನ್ನು ರಕ್ಷಿಸಿ ಮಗಳನ್ನು ಓದಿಸಿ - ಬೇಟಿ ಬಚಾವೋ ಬೇಟಿ ಪಢಾವೋ ಕೇಂದ್ರ ಪುರಸ್ಕೃತ ಈ ಯೋಜನೆಯನ್ನು ವಿಜಯಪುರ ಜಿಲ್ಲೆಯಲ್ಲಿ ಜಾರಿಗೊಳಿಸಲಾಗುತ್ತಿದೆ. ೨೦೧೧ರ ಜನಗಣತಿಯ ಪ್ರಕಾರ ಹೆಣ್ಣು ಮಕ್ಕಳ ಲಿಂಗಾನುಪಾತ ಆರಂಭದಲ್ಲಿ ಕಡಿಮೆ ಇರುವ ಭಾರತದ ೧೦೦ ಜಿಲ್ಲೆಗಳನ್ನು ಆಯ್ಕೆ ಮಾಡಲಾಗಿತ್ತು. ವಿಜಯಪುರ ಜಿಲ್ಲೆಯ ಲಿಂಗಾನುಪಾತದಲ್ಲಿ ೧ ಸಾವಿರ ಗಂಡು ಮಕ್ಕಳಿಗೆ ೯೩೧ ಹೆಣ್ಣು ಮಕ್ಕಳಿದ್ದರು ಎಂದು ವಿಜಯಪುರ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೆ.ಕೆ. ಚವಾಣ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ಕೆ.ಕೆ.ಚವಾಣ್,

<><><>

ಕೆಸಿ ವ್ಯಾಲಿ ಮತ್ತು ಹೆಚ್ ಎನ್ ವ್ಯಾಲಿ ಯೋಜನೆಗಳ ನೀರಿನ ತೃತೀಯ ಹಂತದ ಶುದ್ಧೀಕರಣಕ್ಕೆ ಸರ್ಕಾರ ಮುಂದಾಗಬೇಕು ಹಾಗೂ ಎತ್ತಿನಹೊಳೆ ಯೋಜನೆಗೆ ಈ ವರ್ಷ ೧೦ ಸಾವಿರ ಕೋಟಿ ರೂಪಾಯಿ ಅನುದಾನ ನೀಡಿ ಆದ್ಯತೆಯ ಮೇಲೆ ಕಾಮಗಾರಿ ಪೂರ್ಣಗೊಳಿಸಬೇಕೆಂದು ಚಿಕ್ಕಬಳ್ಳಾಪುರ ಸಂಸದ ಡಾ.ಕೆ.ಸುಧಾಕರ್ ಆಗ್ರಹಿಸಿದ್ದಾರೆ. ಚಿಕ್ಕಬಳ್ಳಾಪುರದ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ನಿರ್ಲಕ್ಷಿಸಿದೆ ಎಂದು ದೂರಿದ್ದಾರೆ.

<><><>

ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಅವರು ತಮ್ಮ ಕಥೆಗಳಲ್ಲಿ ಸ್ತ್ರೀ ಶೋಷಣೆಯ ಒಳಪದರುಗಳನ್ನು ಕಟ್ಟಿಕೊಡುವುದರ ಮೂಲಕ ಸ್ತ್ರೀ ಶೋಷಣೆಯ ಪ್ರಖರ ಪ್ರತಿರೋಧ ವ್ಯಕ್ತಪಡಿಸಿದ್ದಾರೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್. ಎನ್.ಮುಕುಂದರಾಜ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>